ಕರ್ನಾಟಕ ಸರ್ಕಾರ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಆಸು-ಜನಸ್ಪಂದನ ಕೋಶ)

ಸಂಖ್ಯೆ: ಸಿಆಸುಇ(ಆಸು-ಜಸ್ಪಕೋ):48:ಆರ್.ಟಿ.ಐ:2012

ಕರ್ನಾಟಕ ಸರ್ಕಾರದ ಸಚಿವಾಲಯ,
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಗೋಪುರ,
ಬೆಂಗಳೂರು, ದಿನಾಂಕ: 10.05.2012

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಕಾಯ್ದೆ 2005ರಡಿಯಲ್ಲಿ ಅರ್ಜಿದಾರರು ಮಾಹಿತಿ ಕೋರಿದಾಗ ನೀಡಬೇಕಾದ ಅಂಶಗಳು ಮತ್ತು ಕಲಂ 4(1)(ಎ) ಮತ್ತು 4(1)(ಬಿ) ಮಾಹಿತಿಗಳನ್ನು ವೆಬ್‌ಸೈಟಿನಲ್ಲಿ ಪ್ರಕಟಿಸುವಾಗ ಕನ್ನಡದಲ್ಲಿ ಪ್ರಕಟಿಸುವ ಬಗ್ಗೆ.

- - -

ರಾಜ್ಯದಲ್ಲಿ ಮಾಹಿತಿ ಹಕ್ಕು ಅಧಿನಿಯಮ ಜಾರಿಗೆ ಬಂದು ಆರು ವರ್ಷಗಳು ಕಳೆದಿದ್ದರೂ ಹಲವಾರು ಇಲಾಖೆಗಳು ಕಲಂ 4(1)(ಎ) ಮತ್ತು 4(1)(ಬಿ) ಮಾಹಿತಿಗಳನ್ನು ಇದುವರೆವಿಗೂ ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇನ್ನೂ ಕೆಲವು ಇಲಾಖೆಗಳು ಮಾಹಿತಿಗಳನ್ನು ಆಂಗ್ಲಭಾಷೆಯಲ್ಲಿ ಮಾತ್ರ ತಯಾರಿಸಿ ವೆಬ್‌ಸೈಟಿನಲ್ಲಿ ಹಾಕಿರುತ್ತಾರೆ. ಆದರೆ, ಸದರಿ ಮಾಹಿತಿಗಳು ಕನ್ನಡ ಭಾಷೆಯಲ್ಲಿ ಇಲ್ಲದೇ ಇರುವುದು ವಿಪರ್ಯಾಸ. ಸಾರ್ವಜನಿಕರು ಮಾಹಿತಿ ಹಕ್ಕು ಕಾಯ್ದೆಯಡಿಯಲ್ಲಿ ಮಾಹಿತಿ ಕೋರಿದಾಗ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಸದರಿ ಅರ್ಜಿಗಳಿಗೆ ಮಾಹಿತಿ ನೀಡುವಾಗ ಸಾರ್ವಜನಿಕ ಮಾಹಿತಿ ಅಧಿಕಾರಿ ಹೆಸರು, ಪದನಾಮ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ, ಈ ಮಾಹಿತಿಗಳನ್ನು ಒಳಗೊಂಡಿಲ್ಲದೇ ಇರುವುದೂ ಸಹ ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಆದ್ದರಿಂದ ಮಾಹಿತಿ ಹಕ್ಕು ಅಧಿನಿಯಮ 2005ರನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡ ಅಂಶಗಳನ್ನು ಪಾಲಿಸುವಂತೆ ಕೋರಲಾಗಿದೆ.

ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ 4(1)(ಎ) ಮತ್ತು 4(1)(ಬಿ) ಮಾಹಿತಿಗಳನ್ನು ಕಡ್ಡಾಯವಾಗಿ ಕನ್ನಡ ಭಾಷೆಯಲ್ಲಿ ವೆಬ್‌ಸೈಟಿನಲ್ಲಿ ಪ್ರಕಟಿಸುವುದು. ಸಾರ್ವಜನಿಕರು ಮಾಹಿತಿ ಹಕ್ಕು ಕಾಯ್ದೆಯಡಿಯಲ್ಲಿ ಮಾಹಿತಿ ಕೋರಿದಾಗ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮಾಹಿತಿ ನೀಡುವಾಗ ಸಾರ್ವಜನಿಕ ಮಾಹಿತಿ ಅಧಿಕಾರಿ ಹೆಸರು, ಪದನಾಮ, ಕಛೇರಿ ವಿಳಾಸ, ದೂರವಾಣಿ ಸಂಖ್ಯೆ, ಈ ಮಾಹಿತಿಗಳನ್ನು ಕಡ್ಡಾಯವಾಗಿ ಒಳಗೊಂಡಿರತಕ್ಕದ್ದು.

. . . . 2

ಮಾಹಿತಿ ಹಕ್ಕು 2005ರ ಕಲಂ 4(1)(ಎ) ರನ್ವಯ ಎಲ್ಲಾ ಸರ್ಕಾರಿ ಇಲಾಖೆಗಳು ಹಾಗೂ ಕಛೇರಿಗಳಲ್ಲಿ ಮಾಹಿತಿ ಪಡೆಯಲು ಅನುಕೂಲವಾಗುವಂತೆ ಕ್ರಮಬದ್ಧವಾದ ವಿಷಯಪಟ್ಟಿ ಮತ್ತು ಸೂಚಿಪಟ್ಟಿಯನ್ನೊಳಗೊಂಡ ಎಲ್ಲಾ ದಾಖಲೆಗಳನ್ನು ನಿರ್ವಹಿಸತಕ್ಕದ್ದು ಹಾಗೂ ಮಾಹಿತಿಯನ್ನು ಕಾಲಕಾಲಕ್ಕೆ ಪರಿಷ್ಕರಿಸತಕ್ಕದ್ದು. ಹಾಗೆಯೇ ಸದರಿ ಅಧಿನಿಯಮದ ಕಲಂ 4(1)(ಬಿ)ರನ್ವಯ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು ಆಯಾ ಇಲಾಖೆಯಲ್ಲಿನ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳು, ಮೇಲ್ಮನವಿ ಪ್ರಾಧಿಕಾರಿಗಳ ಹೆಸರು, ಹುದ್ದೆಗಳನ್ನು ಸದರಿ ಕಲಂನಲ್ಲಿ ತಿಳಿಸಿರುವಂತೆ ಇತರ ವಿವರಗಳೊಂದಿಗೆ ಕಛೇರಿಗಳ ಮುಂಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು. ಹಾಗೆಯೇ ಈ ಎಲ್ಲಾ ವಿವರಗಳನ್ನು ಕಲಂ 4(2)ರನ್ವಯ ಸ್ವಪ್ರೇರಿತವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮ ಜರುಗಿಸತಕ್ಕದ್ದು.

ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಮತ್ತು ಇಲಾಖೆಯ ಮುಖ್ಯಸ್ಥರು ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಮೇಲ್ಕಂಡ ಅಂಶಗಳನ್ನು ಪಾಲಿಸಲಾಗುತ್ತಿರುವ ಬಗ್ಗೆ ದೃಢಪಡಿಸಿಕೊಳ್ಳಬೇಕು.

ಎಲ್. ವೆಂಕಟಗಿರಿಯಪ್ಪ

(ಎಲ್. ವೆಂಕಟಗಿರಿಯಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಸು-ಜನಸ್ಪಂದನ)

ಇವರಿಗೆ:

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು
3. ಎಲ್ಲಾ ಜಿಲ್ಲಾಧಿಕಾರಿಗಳು/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು/ ಪೋಲೀಸ್ ವರಿಷ್ಠಾಧಿಕಾರಿಗಳು